ಕುಡಿಯುವ ನೀರಿನ ಸೌಲಭ್ಯವನ್ನು ನಿರ್ಮಿಸುವ ಕಾಮಗಾರಿಯನ್ನು ಕೈಗೆತ್ತಿಕೊಂಡಿದ್ದು, ಕಾಮಗಾರಿಯು ಪ್ರಗತಿಯಲ್ಲಿದೆ. ಅಲ್ಲದೆ ಈ ಬೆಟ್ಟಕ್ಕೆ ಮೆಟ್ಟಿಲುಗಳ ನಿರ್ಮಾಣ, ಅವುಗಳಿಗೆ ರೈಲಿಂಗ್ ಅಳವಡಿಕೆ ಹಾಗೂ ಡಾರ್ಮೆಟರಿ ಬ್ಲಾಕ್ ನಿರ್ಮಾಣ ಮಾಡಲು ಕ್ರಮ ಜರುಗಿಸುತ್ತಿದ್ದು, ಸೂಕ್ತ ನಿವೇಶನ ಒದಗಿಸುವಂತೆ ಕೋರಿ ತುಮಕೂರಿನ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ.

ಆ) 12 ನೇ ಹಣಕಾಸಿನ ಆಯೋಗದ ಯೋಜನೆಯ ಅಡಿಯಲ್ಲಿ ಸಿದ್ಧರಬೆಟ್ಟದ ಅಭಿವೃದ್ಧಿಗಾಗಿ ರೂ. 40.000 ಲಕ್ಷಗಳನ್ನು ಮಂಜೂರು ಮಾಡಲಾಗಿದೆ. ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಚಾಲನೆಯಲ್ಲಿದ್ದು ಪ್ರಸ್ತುತ ಯಾವುದೇ ವೆಚ್ಚ ಆಗಿರುವುದಿಲ್ಲ.

1464 (1663) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಬೆಳ್ಳಾವಿ) :– ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಬೆಳ್ಳಾವಿ ವಿಧಾನಸಭಾ ಕ್ಷೇತ್ರದ, ಬೆಳ್ಳಾವಿ, ಚೇಳೂರು, ತೊವಿನಕೆರೆ, ದೊಡ್ಡೇರಿ, ಕೊರಾ ಈ ಹೋಬಳಿ ಕೇಂದ್ರಗಳಲ್ಲಿ ಮಿನಿ ಕ್ರೀಡಾಂಗಣ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು;

ಆ) ಇವುಗಳಿಗೆ ಅನುದಾನವನ್ನು ಒದಗಿಸಲಾಗಿದೆಯೇ;

ಇ) ಹಾಗಿದ್ದಲ್ಲಿ ಎಷ್ಟು ಅನುದಾನವನ್ನು ಒದಗಿಸಲಾಗಿದೆ;

ಈ) ಯಾವಾಗ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು?

ಶ್ರೀ ಹನುಮಂತಪ್ಪ ವೈ. ಆಲ್ಕೋಡ್ (ಯುವಜನಸೇವಾ ಹಾಗೂ ಕ್ರೀಡಾ ಸಚಿವರು):

ಅ) ಪ್ರಸ್ತುತ ಸರ್ಕಾರವು ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಕ್ರೀಡಾಂಗಣವನ್ನು ನಿರ್ಮಿಸುವ ಯೋಜನೆಯನ್ನು ಆದ್ಯತೆ ಮೇಲೆ ಕೈಗೆತ್ತಿಕೊಂಡಿದೆ.

ಹೋಬಳಿ ಮಟ್ಟದಲ್ಲಿ ಕ್ರೀಡಾಂಗಣ ನಿರ್ಮಾಣ ಯೋಜನೆ ಪ್ರಸ್ತುತ ಜಾರಿಯಲ್ಲಿರುವುದಿಲ್ಲವಾದ್ದರಿಂದ ತುಮಕೂರು ಜಿಲ್ಲೆ ಬೆಳ್ಳಾವಿ ವಿಧಾನಸಭಾ ಕ್ಷೇತ್ರದ ಬೆಳ್ಳಾವಿ, ಚೇರೂರು, ತೊವಿನಕೆರೆ, ದೊಡ್ಡೇರಿ, ಕೊರಾ ಈ ಹೋಬಳಿ ಕೇಂದ್ರಗಳಲ್ಲಿ ಮಿನಿ ಕ್ರೀಡಾಂಗಣ ನಿರ್ಮಿಸಲು ಸರ್ಕಾರ ಕ್ರಮ ಕೈಗೊಂಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

1466 (1680) ಶ್ರೀ ಲಾಲಾಜಿ. ಆರ್. ಮೆಂಡನ್ (ಕಾಪು) :– ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರಾವಳಿ ಜಿಲ್ಲೆಗಳಲ್ಲಿ ಅಭದ್ರಗೊಳಿಸುವ ಹಾಗೂ ಸಾಮಾಜಿಕ ಸ್ವಾಸ್ಥಕ್ಕೆ ತೊಂದರೆಯಾಗುವಂತಹ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ನಿಯಂತ್ರಣಕ್ಕೆ ಕೈಗೊಂಡ ಕ್ರಮಗಾಳಾವುವು;

ಇ) ಸಮುದ್ರ ಮಾರ್ಗವೇ ಎಂತಹ ಚಟುವಟಿಕೆಗೆ ರಹದಾರಿಯಾಗಿದ್ದಲ್ಲಿ ಕರಾವಳಿ ರಕ್ಷಣೆಗೆ ಹಾಗೂ ಕರಾವಳಿ ಜನರ ರಕ್ಷಣೆಗೆ ಸರ್ಕಾರದ ಭರವಸೆಯ ಕಾರ್ಯಗಳೇನು?

ಶ್ರೀ ಎಂ.ಪಿ. ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):

ಅ) ಹೌದು ಬಂದಿದೆ.

ಆ) ಈ ಉದ್ದೇಶಕ್ಕಾಗಿ ಕರಾವಳಿ ಪ್ರದೇಶಗಳಲ್ಲಿ ಮಾಹಿತಿ ಸಂಗ್ರಹಣಾ ವ್ಯವಸ್ಥೆಯನ್ನು ಚುರುಕುಗೊಳಿಸಿದೆ ಮತ್ತು ಕರಾವಳಿ ಕಾವಲು ಪಡೆಯನ್ನು ರಚಿಸಲಾಗಿದೆ.